ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: 10 ನೀರಾವರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 25/12/20

## ಯೋಜನಾ ಪ್ರಾಧಿಕಾರದಲ್ಲಿ ₹ 576 ಕೋಟಿ ವಂಚನೆ
## ಕೆರೆಗಳ ಅಭಿವೃದ್ಧಿ ಹೆಸರಲ್ಲಿ ₹ 260 ಕೋಟಿ ಅವ್ಯವಹಾರ

# ಆನೇಕಲ್ ಕೆರೆ ಅಭಿವೃದ್ಧಿ ಹೆಸರಲ್ಲಿ ಗೋಲ್‌ಮಾಲ್

25/12/20

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಆನೇಕಲ್ ತಾಲೂಕಿನಲ್ಲಿ ಅಭಿವೃದ್ಧಿ ಹೆಸರಿನಲ್ಲಿ ಬರೋಬ್ಬರಿ 838 ಕೋಟಿ ರು. ಗಳ ಹಗರಣ ನಡೆದಿದೆ ಎಂದು ಆರೋಪಿಸಿ ಬೆಂಗಳೂರು ದಕ್ಷಿಣ ಜಿಲ್ಲಾ ಬಿಜೆಪಿ ಅಧ್ಯಕ್ಷ ಎನ್.ಆರ್.ರಮೇಶ್, ಎಸಿಬಿ ಮತ್ತು ಲೋಕಾಯುಕ್ತದಲ್ಲಿ ದೂರು ದಾಖಲಿಸಿದ್ದಾರೆ.

ಆನೇಕಲ್ ಯೋಜನಾ ಪ್ರಾಧಿಕಾರದಲ್ಲಿ 576.60 ಕೋಟಿ ರು. ಹಾಗೂ ಆನೇಕಲ್ ತಾಲೂಕಿನ 69 ಕೆರೆಗಳ ಅಭಿವೃದ್ಧಿ ಹೆಸರಿನಲ್ಲಿ 260.61 ಕೋಟಿ ರು. ಭ್ರಷ್ಟಾಚಾರ ನಡೆದಿದ್ದು, ಬೆಂಗಳೂರು ನಗರ ಜಿಪಂನಲ್ಲಿ ಸಿಇಒಗಳಾಗಿ ಕಾರ್ಯನಿರ್ವಹಿಸಿದ ನಾಲ್ವರು ಐಎಎಸ್ ಅಧಿಕಾರಿಗಳು, 10ಕ್ಕೂ ಹೆಚ್ಚು ಎಂಜಿನಿಯರ್‌ಗಳು ಇದರಲ್ಲಿ ಶಾಮೀಲಾಗಿದ್ದು, ಸ್ಥಳೀಯ ಶಾಸಕ ಶಿವಣ್ಣ ಹಾಗೂ ಕಾಮಗಾರಿಗಳನ್ನು ನಿರ್ವಹಿಸಿದ ಎಲ್ಲ ಗುತ್ತಿಗೆದಾರರ ವಿರುದ್ಧವೂ ಕೂಡ ದೂರು ದಾಖಲಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಥಳೀಯ ಶಾಸಕರು, ಹಿಂಬಾಲಕ ಗುತ್ತಿಗೆದಾರರಿಗೆ ಎಲ್ಲ ಕಾಮಗಾರಿಗಳ ಗುತ್ತಿಗೆ ಸಿಗುವ ಹಾಗೆ ವ್ಯವಸ್ಥಿತ ಸಂಚು ನಡೆಸಿ ಅಪಾರ ಪ್ರಮಾಣದ ಹಣ ಹಗಲು ದರೋಡೆಯಾಗಲು ಯೋಜನಾ ಪ್ರಾಧಿಕಾರದ ಅಧಿಕಾರಿಗಳೇ ಕಾರಣರಾಗಿದ್ದಾರೆ ಎಂದು ಆರೋಪಿಸಿದ್ದಾರೆ.

**ಶೇ.25ರಷ್ಟು ಅನುದಾನ ಸದ್ಬಳಕೆಯಾಗಿಲ್ಲ:** ದಾಖಲೆಗಳನ್ನಿಟ್ಟುಕೊಂಡು ಆಯಾ ಪ್ರದೇಶಗಳನ್ನು ಖುದ್ದಾಗಿ ಪರಿಶೀಲಿಸಿದರೆ ಅನುದಾನದ ಪೈಕಿ ಶೇ.25ರಷ್ಟು ಕೂಡ ಸದ್ಬಳಕೆಯಾಗಿಲ್ಲ. ಈ ಅವಧಿಯಲ್ಲಿ ಕಾರ್ಯನಿರ್ವಹಿಸಿದ ನಾಲ್ವರು ಐಎಎಸ್ ಅಧಿಕಾರಿಗಳು ಕೂಡ ಶಾಮೀಲಾಗಿದ್ದಾರೆ ಎಂದು ಆರೋಪಿಸಿದರು.

ಅಲ್ಲದೇ ಆನೇಕಲ್ ತಾಲೂಕಿನ 67 ಕೆರೆಗಳು ಮತ್ತು ಕನಕಪುರ ತಾಲೂಕಿನ ಎರಡು ಕೆರೆಗಳಿಗೆ ನೀರು ತುಂಬಿಸುವ ಏತ ನೀರಾವರಿ ಯೋಜನೆಗೆ ಸಂಬಂಧಿಸಿದಂತೆ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ವಿಭಾಗದ ಟೆಂಡರ್ ಅನುಷ್ಠಾನದಲ್ಲಿಯೂ ಕೂಡ ಬೃಹತ್ ಹಗರಣ ನಡೆದಿದೆ ಎಂದು ಆರೋಪಿಸಿದ್ದಾರೆ.



ಬೆಂಗಳೂರು ದಕ್ಷಿಣ ಜಿಲ್ಲಾ ಬಿಜೆಪಿ ಅಧ್ಯಕ್ಷ ಎನ್.ಆರ್.ರಮೇಶ್ ಅವರು ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿಯಾಗಿ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಬೇಕು ಎಂದು ಮನವಿ ಸಲ್ಲಿಸಿದರು.

**ಸಿಎಂಗೆ ದೂರು**

**ಇದೇ ವಿಚಾರಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿಯಾಗಿರುವ ರಮೇಶ್ ಅವರು, ಈ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಬೇಕು ಎಂದು ಮನವಿ ಸಲ್ಲಿಸಿದ್ದಾರೆ. ಆನೇಕಲ್ ಯೋಜನಾ ಪ್ರಾಧಿಕಾರದ 576 ಕೋಟಿ ಮೊತ್ತ ಹಾಗೂ ಸಣ್ಣ ನೀರಾವರಿ ಮತ್ತು ಅಂತರ್ಜಲ ವಿಭಾಗದ 260.61 ಕೋಟಿ ಮೊತ್ತದ ಅಂದರೆ 838 ಕೋಟಿ ಮೊತ್ತದ ಎರಡು ಬೃಹತ್ ಹಗರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿಗಳು, ಗುತ್ತಿಗೆದಾರರು ಎಲ್ಲರ ವಿರುದ್ಧ ಇಲಾಖೆ ವಿಚಾರಣೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.**